ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

22

ಇಲಾಖೆ / ವಿಷಯ : DEPARTMENT / SUBJECT: ಬಿಬಿಎಂಪಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 11/9/20

# ಗೌರವ್ ಗುಪ್ತಾ ಆಡಳಿತಾಧಿಕಾರಿ

## ಬಿಬಿಎಂಪಿ ಸದಸ್ಯರ ಅವಧಿ ಅಂತ್ಯ

ಬೆಂಗಳೂರು: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಚುನಾಯಿತ ಸದಸ್ಯರ 5 ವರ್ಷಗಳ ಆಡಳಿತ ಅವಧಿ ಗುರುವಾರ ಅಂತ್ಯ ಕಂಡಿದ್ದು, ಸರ್ಕಾರ ಆಡಳಿತಾಧಿಕಾರಿಗಳನ್ನು ನೇಮಿಸಿದೆ.

ಕೊರೊನಾ ಸೋಂಕು ಭೀತಿ ಹಿನ್ನೆಲೆಯಲ್ಲಿ ಪಾಲಿಕೆ ಸದಸ್ಯರ ಅಧಿಕಾರ ಅವಧಿಯನ್ನು ಕನಿಷ್ಠ 3 ತಿಂಗಳಿಂದ, 6 ತಿಂಗಳವರೆಗೆ ವಿಸ್ತರಿಸಬೇಕು ಎಂದು ಬೇಡಿಕೆ ಇತ್ತಾದರೂ, ಸರ್ಕಾರ ಅದಕ್ಕೆ ಸೊಪ್ಪು ಹಾಕಲಿಲ್ಲ. ಗುರುವಾರ ಸಂಜೆ ಹೊತ್ತಿಗೆ ಆಡಳಿತಾಧಿಕಾರಿಯನ್ನಾಗಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ಗೌರವ್ ಗುಪ್ತಾರನ್ನು ನೇಮಕ ಮಾಡಿತು.

ಇನ್ನು ಮುಂದೆ ಪಾಲಿಕೆಯ ಆಡಳಿತವನ್ನು ಗೌರವ್ ಗುಪ್ತಾ ಹಾಗೂ ಆಯುಕ್ತ ಮಂಜುನಾಥ್ ಪ್ರಸಾದ್ ಅವರು ನೋಡಿಕೊಳ್ಳಲಿದ್ದಾರೆ. ಗೌರವ್ ಗುಪ್ತಾ ಅವರು ಶುಕ್ರವಾರ ಬೆಳಗ್ಗೆ 10ಕ್ಕೆ ಪಾಲಿಕೆಯ ಕೇಂದ್ರ ಕಚೇರಿಯಲ್ಲಿ ಅಧಿಕಾರ ಸ್ವೀಕರಿಸಲಿದ್ದಾರೆ.

ಈ ಹಿಂದೆ 2015ರಲ್ಲಿ ಪಾಲಿಕೆಯನ್ನು ಸೂಪರ್‌ಸೀಡ್ ಮಾಡಿ ವಿಜಯಭಾಸ್ಕರ್ ಅವರನ್ನು ಆಡಳಿತಾಧಿಕಾರಿಯಾಗಿ ನೇಮಿಸಲಾಗಿತ್ತು. ಕುಮಾರನಾಯ್ಕ್ ಆಯುಕ್ತರಾಗಿದ್ದರು. ಮೂರು ತಿಂಗಳ ನಂತರ ಚುನಾವಣೆ ನಡೆದಿತ್ತು. ಅದಕ್ಕೂ ಮುಂಚೆ 2006ರಲ್ಲಿ ಬಿಎಂಪಿ ಇದ್ದಾಗ ದಿಲೀಪ್ ರಾವ್, ಆ ನಂತರ ಕೆ.ಎಂ. ಶಿವಕುಮಾರ್ ಅವರನ್ನು ಆಡಳಿತಾಧಿಕಾರಿಯಾಗಿ ನೇಮಿಸಲಾಗಿತ್ತು. ಮೂರು ವರ್ಷದ ನಂತರ ಬಿಬಿಎಂಪಿಗೆ ಚುನಾವಣೆ ನಡೆದಿತ್ತು.

### ನಿರ್ವಹಣೆ ಹೇಗೆ?

**ಇನ್ನು ಮುಂದೆ ನೇರವಾಗಿ ಆಡಳಿತಾಧಿಕಾರಿಗಳೇ ನಿರ್ಧಾರಗಳನ್ನು ತೆಗೆದುಕೊಳ್ಳಲಿದ್ದು, ಸರ್ಕಾರಕ್ಕೆ ಕಳುಹಿಸಿಕೊಡಲಿದ್ದಾರೆ. ಹಾಗೆಯೇ, ಆಯುಕ್ತರು ಆಡಳಿತಾಧಿಕಾರಿಗೆ ವರದಿ ಒಪ್ಪಿಸಲಿದ್ದಾರೆ. ಪಾಲಿಕೆ ವ್ಯಾಪ್ತಿಯ 8 ವಲಯಗಳಲ್ಲಿನ ಅಧಿಕಾರಿಗಳೂ ಆಡಳಿತಾಧಿಕಾರಿಗೇ ವರದಿ ಒಪ್ಪಿಸಲಿದ್ದಾರೆ.**